# ಕರ್ನಾಟಕ ಲೋಕಾಯುಕ್ತ

ಕಂಪ್ಲೆಂಟ್/ಉಪಲೋಕ್/ಎಂವೈಎಸ್/1660/2021
ಮಂಡನಾಧಿಕಾರಿಗಳ ಶಾಖೆ : ಪಿ.ಎಆರ್.ಇ-1

ಬಹುಮಹಡಿಗಳ ಕಟ್ಟಡ
ಡಾ. ಬಿ.ಆರ್.ಅಂಬೇಡ್ಕರ್ ವೀದಿ,
ಬೆಂಗಳೂರು, ದಿನಾಂಕ: 21-04-2022.

## ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12(3) ರನ್ವಯ ಶಿಫಾರಸ್ಸು ವರದಿ

**ವಿಷಯ: ಶ್ರೀ ರಮೇಶ ಎಂ, ಭೂಮಾಪಕರು, ಭೂ ಮಾಪನ ಇಲಾಖೆ, ಸಕಲೇಶಪುರ, ಹಾಸನ ಜಿಲ್ಲೆ** – ಆದ ಇವರು ಸರ್ಕಾರಿ/ಸಾರ್ವಜನಿಕ ನೌಕರರಾಗಿದ್ದು, ದುರ್ನಡತೆ ಎಸಗಿರುವ ಬಗ್ಗೆ ಇವರ ವಿರುದ್ಧ ನಡವಳಿ ಕುರಿತು.

----

1. ಪೋಲೀಸ್ ಇನ್ಸ್‌ಪೆಕ್ಟರ್, ಭ್ರಷ್ಟಾಚಾರ ನಿಗ್ರಹದಳ ಪೊಲೀಸ್ ಠಾಣೆ, ಹಾಸನ, (ಇನ್ನು ಮುಂದೆ ತನಿಖಾಧಿಕಾರಿ ಎಂದು ಕರೆಯಲ್ಪಡುತ್ತಾರೆ). ಇವರು ಸಲ್ಲಿಸಿದ ತನಿಖಾ ವರದಿ ಮತ್ತು ಸಂಬಂಧಿಸಿದ ದಾಖಲೆಗಳನ್ನು ಪರಿಶೀಲಿಸಿದಾಗ, ಸದರಿ ವರದಿಯಲ್ಲಿ **ಶ್ರೀ ರಮೇಶ ಎಂ, ಭೂಮಾಪಕರು, ಭೂ ಮಾಪನ ಇಲಾಖೆ, ಸಕಲೇಶಪುರ, ಹಾಸನ ಜಿಲ್ಲೆ** (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ದೂರುದಾರರಾದ **ಶ್ರೀ ನಾಗೇಶ್ ಎಂ.ಎ, ಬಿನ್ ಅಪ್ಪಣ್ಣಗೌಡ, ಮಾವಿನೋರು ಗ್ರಾಮ, ಹೆತ್ತೂರು ಹೋಬಳಿ, ಸಕಲೇಶಪುರ ತಾಲ್ಲೂಕು, ಹಾಸನ ಜಿಲ್ಲೆ** (ಇನ್ನು ಮುಂದೆ ದೂರುದಾರರು ಎಂದು ಕರೆಯಲ್ಪಡುತ್ತಾರೆ) ಇವರು ಭೇಟಿ ಮಾಡಿದಾಗ ಲಂಚದ ಹಣಕ್ಕೆ ಬೇಡಿಕೆ ಇಟ್ಟು ಅದನ್ನು ಪಡೆದು, ದುರ್ನಡತೆ ತೋರಿಸಿರುವುದು ಮೇಲ್ನೋಟಕ್ಕೆ ಕಂಡು ಬಂದಿದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆ 1984, ಕಲಂ 7(2) ರನ್ವಯ ಗೌರವಾನ್ವಿತ ಉಪಲೋಕಾಯುಕ್ತರು ಸ್ವಯಂ ಪ್ರೇರಿತ ತನಿಖೆಯನ್ನು ಕೈಗೊಂಡಿರುತ್ತಾರೆ.

2. ದೂರುದಾರರು ತಮ್ಮ ದೂರಿನಲ್ಲಿ, ದೂರುದಾರರ ತಂದೆಯ ಹೆಸರಿನಲ್ಲಿ ಪಿತ್ರಾರ್ಜಿತ ಆಸ್ತಿಯನ್ನು 05 ವರ್ಷಗಳ ಹಿಂದೆ ದೂರುದಾರರು ಮತ್ತು ಅವರ ಅಣ್ಣ ಗಣೇಶ್ ರವರು ಭಾಗ ಮಾಡಿಕೊಂಡಿದ್ದು, ಸದರಿ ಜಮೀನನ್ನು ದೂರುದಾರರು ಮತ್ತು ಅವರ ಅಣ್ಣ ಗಣೇಶ್ ರವರ ಹೆಸರಿಗೆ ಖಾತೆ ಮಾಡಿಸಿಕೊಳ್ಳಲು ಭೋರ್ ಮನೆ ಗ್ರಾಮಕ್ಕೆ ಸೇರಿದ ಸರ್ವೆ ನಂ: 41, 42, ಹಾಗೂ ಯತ್ತಳ್ಳ ಗ್ರಾಮದ ಸರ್ವೆ ನಂ: 153, 166, 144, 118 ಜಮೀನನ್ನು ಸರ್ವೆ ಮಾಡಿಕೊಡುವಂತೆ, ಹೆತ್ತೂರು ನಾಡಕಚೇರಿಯಲ್ಲಿ ದಿನಾಂಕ: 23-08-2017 ರಂದು ಅರ್ಜಿ ಕೊಟ್ಟಿದ್ದು, ಜಮೀನನ್ನು ಸರ್ವೆ

ಮಾಡಿಕೊಡಲು ಸರ್ಕಾರಕ್ಕೆ ಪಾವತಿಸಬೇಕಾದ ಆರು ಸಾವಿರ ರೂಗಳನ್ನು ಪಾವತಿಸಿದ್ದು, ಮೇಲ್ಕಂಡ ಜಮೀನನ್ನು ಸರ್ವೆ ಮಾಡಲು ಸಕಲೇಶಪುರ ಸರ್ವೆಯರ್ ಎದುರುದಾರರು ಹೋಗಿದ್ದು, ಜಮೀನು ಸರ್ವೆ ಮಾಡಿದ ನಂತರ ಫೋಡ್ ಮಾಡಿಕೊಡಲು 18,000/- ರೂ ಹಣಕ್ಕೆ ಬೇಡಿಕೆ ಇಟ್ಟಿದ್ದು, ದೂರುದಾರರು ಸ್ವಲ್ಪ ಕಡಿಮೆ ಮಾಡಿಕೊಳ್ಳಿ ಎಂದು ಕೇಳಿದ್ದಕ್ಕೆ, ಎದುರುದಾರರು 15,000/- ರೂ ಕೊಡಬೇಕೆಂದು ಹೇಳಿದರಿಂದ, ದೂರುದಾರರು 13,500/- ರೂ ಕೊಡುವುದಾಗಿ ಹೇಳಿ, ಜಮೀನು ಸರ್ವೆ ಮಾಡಿದ ದಿನ 3500/- ರೂ ಹಣವನ್ನು ಕೊಟ್ಟಿದ್ದು, ದಿನಾಂಕ: 21-09-2017 ರಂದು ಸಕಲೇಶಪುರ ಸರ್ವೆ ಕಚೇರಿಯಲ್ಲಿ ಎದುರುದಾರರಿಗೆ 2000/- ಹಣ ಕೊಟ್ಟಿದ್ದು, ಉಳಿಕೆ 8000/- ರೂ ಹಣವನ್ನು ಜಮೀನಿನ ಫೋಡ್ ಮಾಡಿದ ನಂತರ ಕೊಡುವುದಾಗಿ ತಿಳಿಸಿರುತ್ತಾರೆ. ಸದರಿ ಲಂಚದ ಹಣಕ್ಕೆ ಬೇಡಿಕೆ ಇಟ್ಟ ಸಂಭಾಷಣೆಯನ್ನು ದೂರುದಾರರು ತನ್ನ ಮೊಬೈಲ್ ನಲ್ಲಿ ವಿಡಿಯೋ ರೆಕಾರ್ಡ್ ಮಾಡಿಕೊಂಡಿರುತ್ತಾರೆ. ದೂರುದಾರರು ಲಂಚ ನೀಡಿ ಎದುರುದಾರರಿಂದ ಕೆಲಸ ಮಾಡಿಸಿಕೊಳ್ಳಲು ಇಷ್ಟವಿಲ್ಲದೆ ಇದ್ದುದರಿಂದ, ದಿನಾಂಕ: 23-09-2017 ರಂದು ಪೊಲೀಸ್ ಉಪಾಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಹಾಸನ, ಇವರಲ್ಲಿ ದೂರು ನೀಡಿದ್ದು, ಮೊ.ಸಂಖ್ಯೆ: 10/2017 ರಲ್ಲಿ ಭ್ರಷ್ಟಾಚಾರ ಪ್ರತಿಬಂಧಕ ಕಾಯ್ದೆ 1988 ಕಲಂ 7ರ ಅಡಿಯಲ್ಲಿ ಪ್ರಕರಣ ದಾಖಲು ಮಾಡಿರುತ್ತಾರೆ.

3. ದಿನಾಂಕ: 23-09-2017 ರಂದು, ತನಿಖಾಧಿಕಾರಿಯವರು ಪಂಚರಾದ ಶ್ರೀ ಎಸ್.ಎಂ.ಮಂಜುನಾಥ ಪಂಚ-1, ಶ್ರೀ ಎಂ.ವೆಂಕಟೇಶ್ ಪಂಚ-2, ಇವರನ್ನು ಬರಮಾಡಿಕೊಂಡು ದೂರುದಾರರನ್ನು ಪರಿಚಯಿಸಿ, ದೂರಿನ ವಿಚಾರವನ್ನು ತಿಳಿಸಿ, ದೂರುದಾರರು ಎದುರುದಾರರಿಗೆ ಕೊಡಲು ತಂದಿದ್ದ ಲಂಚದ ಹಣ 8000/- (ಹಣದ ಡಿನಾಮಿನೇಷನ್ 2000/- x 4) ಗಳನ್ನು ಹಾಗೂ ಲಂಚದ ಹಣಕ್ಕೆ ಬೇಡಿಕೆ ಇಟ್ಟ ಸಂಭಾಷಣೆ ದಾಖಲಾಗಿದ್ದ ಮೊಬೈಲ್‌ನ್ನು ಹಾಜರುಪಡಿಸಿರುತ್ತಾರೆ. ಪಂಚ-02 ಲಂಚದ ಹಣದ ಮೌಲ್ಯ ಮತ್ತು ನಂಬರುಗಳನ್ನು ಪರಿಶೀಲಿಸಿದ್ದು, ಪಂಚ-1 ನೋಟಿನ ವಿವರವನ್ನು ಬಿಳಿ ಹಾಳೆಯಲ್ಲಿ ದಾಖಲಿಸಿಕೊಂಡಿರುತ್ತಾರೆ. ನಂತರ ತನಿಖಾಧಿಕಾರಿ ಸೂಚನೆಯ ಮೇರೆಗೆ ಪಂಚ-1 ಶ್ರೀ ಎಸ್.ಎಂ.ಮಂಜುನಾಥ, ಇವರು ಪೊಲೀಸ್ ಸಿಬ್ಬಂದಿಯಿಂದ ಫಿನಾಪ್ತಿಲೀನ್ ಪೌಡರ್ ಲೇಪಿಸಿದ 8,000/- ರೂ.ಗಳ ಹಣವನ್ನು ಎಣಿಸಿ, ದೂರುದಾರರ ಪ್ಯಾಂಟಿನ ಮುಂಬಾಗದ ಜೇಬಿನಲ್ಲಿ ಇಟ್ಟಿರುತ್ತಾರೆ. ತನಿಖಾಧಿಕಾರಿ ದೂರುದಾರರಿಗೆ ನಿಗದಿತ ಸೂಚನೆಯನ್ನು ಕೊಟ್ಟು ಎದುರುದಾರರು ಲಂಚದ ಹಣವನ್ನು ಕೇಳಿ ಪಡೆದಾಗ, ದೂರುದಾರರು ತನ್ನ ಬಲಗೈಯಿಂದ ತಲೆಯನ್ನು ಸವರಿಕೊಳ್ಳುವ ಮೂಲಕ ಸನ್ನೆ ಮಾಡಿ ಸೂಚನೆ ನೀಡಬೇಕೆಂದು ತಿಳಿಸಿರುತ್ತಾರೆ ಹಾಗೂ ಶ್ರೀ ಎಂ.ವೆಂಕಟೇಶ್ ಪಂಚ-2, ಇವರು ದೂರುದಾರರ ಜೊತೆಗೆ ಇದ್ದು, ಘಟನೆಯನ್ನು ಗಮನಿಸಬೇಕೆಂದು ಸೂಚಿಸಿರುತ್ತಾರೆ. ತನಿಖಾಧಿಕಾರಿಯವರು ದೂರುದಾರರಿಗೆ ಒಂದು ವಾಯ್ಸ್ ರೆಕಾರ್ಡ್‌ನ್ನು ಕೊಟ್ಟು ಉಪಯೋಗಿಸುವ ವಿಧಾನವನ್ನು ತಿಳಿಸಿರುತ್ತಾರೆ. ಈ ಸಂಬಂಧವಾಗಿ ಪಂಚರ ಸಮಕ್ಷಮ ಪ್ರಾಯೋಗಿಕ ಪಂಚನಾಮೆಯನ್ನು ದಿನಾಂಕ: 23-09-2017 ರಂದು ಬೆಳಿಗ್ಗೆ 12.00 ರಿಂದ 2.00 ಗಂಟೆಯವರೆಗೆ ಮಾಡಿರುತ್ತಾರೆ.

4. ಅದೇ ದಿನ ಅಂದರೆ, ದಿನಾಂಕ: 23-09-2017 ರಂದು ತನಿಖಾಧಿಕಾರಿಯ ಸೂಚನೆ ಮೇರೆಗೆ ದೂರುದಾರರು ಎದುರುದಾರರನ್ನು ಪೋನ್ ಮೂಲಕ ಸಂಪರ್ಕಿಸುವಂತೆ ಸೂಚಿಸಿದಾಗ, ಕಚೇರಿಯಲ್ಲಿ ಇರುವುದಾಗಿ ಖಾತ್ರಿಪಡಿಸಿಕೊಂಡಿರುತ್ತಾರೆ. ಅದರಂತೆ, ತನಿಖಾಧಿಕಾರಿಯು, ದೂರುದಾರರನ್ನು ಮತ್ತು ಪಂಚ-02 ಮತ್ತು ಸಿಬ್ಬಂದಿಯನ್ನು ಕರೆದುಕೊಂಡು ಮಧ್ಯಾಹ್ನ 3.20ಕ್ಕೆ ಎದುರುದಾರರ ಕಚೇರಿಯ ಸಮೀಪ ಬಂದಿರುತ್ತಾರೆ. ನಂತರ ದೂರುದಾರರು ಪಂಚ-2 ರವರ ಜೊತೆ ಎದುರುದಾರರ ಕಚೇರಿಯ ಕೊಠಡಿಗೆ ಹೋಗಿ, ತಮ್ಮ ಕೆಲಸದ ಬಗ್ಗೆ ವಿಚಾರಿಸಿದಾಗ, ಎದುರುದಾರರು ದೂರುದಾರರನ್ನು ಕೊಠಡಿಯಿಂದ ಹೊರಗೆ ಕರೆದುಕೊಂಡು ಬಂದು, ನಂತರ ಕಚೇರಿಯ ಕೆಳಭಾಗಕ್ಕೆ ಕರೆದುಕೊಂಡು ಬಂದು, ಲಂಚದ ಹಣವನ್ನು ಕೇಳಿದಾಗ, ದೂರುದಾರರು ತನ್ನ ಬಳಿ ಇದ್ದ ಫಿನಾಪ್ತಲಿನ್ ಪೌಡರ್ ಲೇಪಿತ ಲಂಚದ ಹಣವನ್ನು ಎದುರುದಾರರಿಗೆ ಕೊಟ್ಟಾಗ, ಅವರು ಬಲಗೈಯಿಂದ ಪಡೆದು ಎಣಿಕೆ ಮಾಡಿ ಶರ್ಟಿನ ಜೇಬಿನಲ್ಲಿ ಇಟ್ಟುಕೊಂಡಿರುತ್ತಾರೆ. ಆಗ ದೂರುದಾರರು ತನಿಖಾಧಿಕಾರಿಗೆ ನಿಗಧಿತ ಸೂಚನೆಯನ್ನು ಕೊಟ್ಟಿರುತ್ತಾರೆ. ನಂತರ, ತನಿಖಾಧಿಕಾರಿಯವರು, ನಿಗದಿತ ಸೂಚನೆಯನ್ನು ಪಡೆದ ನಂತರ ತಂಡದೊಂದಿಗೆ ಸ್ಥಳಕ್ಕೆ ಬಂದು, ಸದರಿ ಸ್ಥಳವು ಇಕ್ಕಟ್ಟಾಗಿದಿದ್ದರಿಂದ, ತನಿಖಾಧಿಕಾರಿ ಎದುರುದಾರರನ್ನು ಅವರ ಕೊಠಡಿಗೆ ಕರೆದುಕೊಂಡು ಬಂದು, ತನಿಖೆಯನ್ನು ಮುಂದುವರೆಸಿರುತ್ತಾರೆ. ತನಿಖಾಧಿಕಾರಿಯ ಸೂಚನೆ ಮೇರೆಗೆ ಸಿಬ್ಬಂದಿಯವರು, ಎದುರುದಾರರ ಎರಡೂ ಕೈ ಬೆರಳುಗಳನ್ನು ಸೋಡಿಯಂ ಕಾರ್ಬೋನೈಟ್ ದ್ರಾವಣದಿಂದ ಪ್ರತ್ಯೇಕವಾಗಿ ತೊಳೆಸಿದಾಗ, ದ್ರಾವಣವು ನಸುಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತದೆ, ನಂತರ ತನಿಖಾಧಿಕಾರಿಯವರು ಎದುರುದಾರರಿಗೆ ಲಂಚದ ಹಣವನ್ನು ಹಾಜರುಪಡಿಸುವಂತೆ ತಿಳಿಸಿದಾಗ, ಆತನು ಶರ್ಟಿನ ಮುಂಭಾಗದ ಎಡ ಜೇಬಿನಿಂದ ತೆಗೆದು ಹಾಜರುಪಡಿಸಿದಾಗ, ಸದರಿ ಲಂಚದ ಹಣವನ್ನು ಪಂಚ-1 ರವರು ಪರಿಶೀಲಿಸಿ, ಹಣದ ಮೌಲ್ಯ ಮತ್ತು ನೋಟಿನ ನಂಬರುಗಳನ್ನು ಖಾತ್ರಿಪಡಿಸಿಕೊಂಡಿರುತ್ತಾರೆ ಹಾಗೂ ತನಿಖಾಧಿಕಾರಿ ಲಂಚದ ಹಣವನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ. ನಂತರ ತನಿಖಾಧಿಕಾರಿಯವರ ಸೂಚನೆಯ ಮೇರೆಗೆ ಸಿಬ್ಬಂದಿ ಎದುರುದಾರರು ಲಂಚದ ಹಣ ಇಟ್ಟಿದ ಶರ್ಟಿನ ಜೇಬಿನ ಒಳಭಾಗವನ್ನು ಸೋಡಿಯಂ ಕಾರ್ಬೋನೇಟ್ ದ್ರಾವಣದಿಂದ ತೊಳೆದಾಗ ದ್ರಾವಣವು ನಸುಗುಲಾಬಿ ಬಣ್ಣಕ್ಕೆ ಬದಲಾವಣೆಯಾಗಿರುತ್ತಧೆ. ಸದರಿ ಶರ್ಟನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆ. ನಂತರ ತನಿಖಾಧಿಕಾರಿಯವರು ಲಂಚದ ಹಣಕ್ಕೆ ಸಂಬಂಧಿಸಿದಂತೆ ಎದುರುದಾರರನ್ನು ಸಮಜಾಯಿಷಿ ಕೇಳಿದಾಗ ಅವರು **"...ನಾನು ತಿಳಿಸುವುದೇನೆಂದರೆ, ಸಕಲೇಶಪುರ ತಾಲ್ಲೂಕು, ಯತ್ತಳ್ಳಿ ಗ್ರಾಮದ ಅಪ್ಪಣ್ಣಗೌಡ ಬಿನ್ ಮರಿಗೌಡ , 11ಇ ಅರ್ಜಿ ಬಂದಂತೆ ಅಳತೆ ಮಾಡಿದ್ದು, ಅಪ್ಪಣ್ಣಗೌಡರ ಮಕ್ಕಳಾದ ಗಣೇಶ ಮತ್ತು ನಾಗೇಶ ರವರು ಅಳತೆ ಪೂರ್ಣಗೂಳಿಸಿದ ನಂತರ ನನ್ನ ಕೆಲಸ ಮುಗಿಸಿ ಕಛೇರಿಗೆ ಮುಂದಿನ ಕ್ರಮಕ್ಕಾಗಿ ಒಪ್ಪಿಸಿದೆ. ಗಣೇಶ ಮತ್ತು ನಾಗೇಶ ನಮ್ಮ ಕೆಲಸ ಮುಗಿದಿರುವುದಕ್ಕೆ ನಿಮಗೆ ಹಣ ತೆಗೆದುಕೊಳ್ಳಿ ಎಂದು ನನಗೆ ಕೊಟ್ಟರು. ಆದರೆ ಅದರಲ್ಲಿ ಎಷ್ಟು ಹಣ ಇದೆ ಎಂದು ತಿಳಿಯದು ಆದರೆ ಪೊಲೀಸ್ ನಿರೀಕ್ಷಕರು ನಮ್ಮನ್ನು ವಿಚಾರಿಸಿದರು. ಆದರಿಂದ ನಾವು ಹಣಕ್ಕಾಗಿ ಒತ್ತಾಯಿಸಿರುವುದಿಲ್ಲ ಅರ್ಜಿದಾರರೇ ಹಣ ಕೊಟ್ಟಿರುತ್ತಾರೆಂದು ಸಮಜಾಯಿಷಿ ನೀಡಿರುತ್ತಾರೆ. ನಂತರ ತನಿಖಾಧಿಕಾರಿಯವರು ಎದುರುದಾರರ ಸಮಜಾಯಿಷಿ ಬಗ್ಗೆ ದೂರುದಾರರನ್ನು ಹಾಗೂ ಪಂಚ-2 ರವರನ್ನು ಕೇಳಿದಾಗ ಅವರು**

**ಎದುರುದಾರರ ಸಮಜಾಯಿಷಿ ಸಮರ್ಪಕವಾಗಿರುವುದಿಲ್ಲ, ಲಂಚದ ಹಣವನ್ನು ಪಡೆದುಕೊಂಡಿರುತ್ತಾರೆ."** ಎಂದು ಹೇಳಿರುತ್ತಾರೆ. ತನಿಖಾಧಿಕಾರಿಗಳು ಪ್ರಕರಣಕ್ಕೆ ಸಂಬಂಧಿಸಿದ ಪ್ರಮುಖ ಘಟನಾವಳಿಗಳನ್ನು ಚಿತ್ರೀಕರಿಸಿರುತ್ತಾರೆ. ಎದುರುದಾರರು ಅಂದೇ ದಸ್ತಗಿರಿ ಮಾಡಿರುತ್ತಾರೆ. ಈ ಸಂಬಂಧವಾಗಿ ತನಿಖಾಧಿಕಾರಿಯು ಟ್ರ್ಯಾಪ್ ಪಂಚನಾಮೆಯನ್ನು ದಿನಾಂಕ: 23-09-2017 ರಂದು ಮಧ್ಯಾಹ್ನ 3.35 ರಿಂದ ರಾತ್ರಿ 7.00 ಗಂಟೆಯವರೆಗೆ ಪಂಚರ ಸಮಕ್ಷಮ ಎಡಿಎಲ್‌ಆರ್ ಕಚೇರಿಯಲ್ಲಿ ಮಾಡಿರುತ್ತಾರೆ.

5. ತನಿಖಾಧಿಕಾರಿಯವರು, ಸಿಡಿಗಳಲ್ಲಿ ದಾಖಲಾದ ಸಂಭಾಷಣೆ ದೂರುದಾರರ ಹಾಗೂ ಎದುರುದಾರರ ನಿಮ್ಮ ಧ್ವನಿಗೆ ಹಾಗೂ ನಿಮ್ಮ ಮಾದರಿ ಧ್ವನಿಗೆ ಹೋಲಿಕೆ ಸಂಬಂಧವಾಗಿ ವರದಿಯನ್ನು ಕೋರಿ ವಿಧಿ ವಿಜ್ಞಾನ ಪ್ರಯೋಗಾಲಯ, ಬೆಂಗಳೂರು ಇಲ್ಲಿಗೆ ಕಳುಹಿಸಿರುತ್ತಾರೆ.

6. ರಾಸಾಯನಿಕ ತಜ್ಞರ ಪರೀಕ್ಷಾ ವರದಿಯಲ್ಲಿ ನಿಮ್ಮಿಂದ ತನಿಖಾಧಿಕಾರಿಗಳು ಸಂಗ್ರಹಿಸಿದ ಮುದ್ದೆ ಮಾಲುಗಳಲ್ಲಿ ಫಿನಾಪ್ತಿಲೀನ್ ಅಂಶ ಇರುವುದು ದೃಢಪಟ್ಟಿದೆ.

7. ಗೌರವಾನ್ವಿತರ ಆದೇಶದ ಅನ್ವಯ, ಎದುರುದಾರರಿಗೆ ದಿ: 22/09/2021 ರಂದು ಎದುರುದಾರರಿಂದ ಪರಿವೀಕ್ಷಣಾ ಟಿಪ್ಪಣಿಗೆ ಸಮಜಾಯಿಷಿ / ವಿವರಣೆಯನ್ನು ಕೇಳಲಾಗಿದ್ದು, ಎದುರುದಾರರು ತನ್ನ ವಿವರಣೆಯನ್ನು ದಿ: 24/11/2021 ರಂದು ಸಲ್ಲಿಸಿರುತ್ತಾರೆ. ಸದರಿ ವಿವರಣೆಯನ್ನು ಪರಿಶೀಲಿಸಲಾಗಿ, ಎದುರುದಾರರು ಪರಿವೀಕ್ಷಣಾ ಟಿಪ್ಪಣಿಯ ಕಂಡಿಕೆ 2(i) ರಿಂದ 2(vii) ರವರೆಗೆ ಅಂಶಗಳನ್ನು ಸಾರಸಗಟವಾಗಿ ಅಲ್ಲಗಳೆದಿರುತ್ತಾರೆ. ಮುಂದುವರೆದು, ದೂರುದಾರರು ತನ್ನ ವಿರುದ್ಧ ದುರುದೇಶದಿಂದ ದೂರನ್ನು ನೀಡಿರುತ್ತಾರೆ. ನಾನು ಯಾವುದೇ ಕರ್ತವ್ಯ ಲೋಪ ಎಸಗಿರುವುದಿಲ್ಲ ಹಾಗಾಗಿ ಪ್ರಕರಣವನ್ನು ಮುಕ್ತಾಯಗೊಳಿಸಬೇಕೆಂದು ಕೋರಿರುತ್ತಾರೆ. ಎದುರುದಾರರು ನೀಡಿರುವ ಸಮಜಾಯಿಷಿಕೆಯನ್ನು ಈ ಹಂತದಲ್ಲಿ ಪರಿಗಣಿಸಲು ಬರುವುದಿಲ್ಲ ಹಾಗೂ ಯಾವುದೇ ದಾಖಲೆಗಳನ್ನು ಹಾಜರುಪಡಿಸಿರುವುದಿಲ್ಲ, ಹಾಗಾಗಿ ಇವರ ವಿರುದ್ಧ ವಿಚಾರಣೆ ಮಾಡದೆ ಇರಲು ಸೂಕ್ತ ಕಾರಣಗಳು ಕಂಡುಬರುವುದಿಲ್ಲ. ಸಾಕ್ಷಿದಾರರ ಹೇಳಿಕೆಗಳು ದೂರು ಅರ್ಜಿ ಹಾಗೂ ತನಿಖಾಧಿಕಾರಿಗಳು ಸಂಗ್ರಹಿಸಿದ ದಾಖಲೆ ಮತ್ತು ಇತರೆ ಅಂಶಗಳಿಂದ ಮೇಲ್ನೋಟಕ್ಕೆ ದುರ್ನಡತೆ ಕಂಡು ಬರುತ್ತದೆ.

8. ಈ ಮೇಲ್ಕಂಡ ಅಂಶಗಳನ್ನು ಮತ್ತು ತನಿಖಾ ವರದಿಯ ವಿವರಗಳನ್ನು ಪರಿಶೀಲಿಸಲಾಗಿ, ಎದುರುದಾರರು ತಮ್ಮ ಕರ್ತವ್ಯದಲ್ಲಿ ಸಂಪೂರ್ಣ ನಿಷ್ಠೆಯನ್ನು ಪಾಲಿಸದೆ, ಕರ್ತವ್ಯ ಶ್ರದ್ಧೆಯನ್ನು ಹೊಂದಿರದೆ, ಸರ್ಕಾರಿ ನೌಕರನಿಗೆ ತರವಲ್ಲದ ರೀತಿಯಲ್ಲಿ ನಡೆದುಕೊಂಡು, ಭ್ರಷ್ಟಾಚಾರವೆಸಗಿ, ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 1966ರ (ಪ್ರಸುತ್ತ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಗಳು 2021) ನಿಯಮ 3(1) (i) ರಿಂದ (iii) ರನ್ವಯ ದುರ್ನಡತೆಯನ್ನು ಎಸಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತದೆ.

9. ಮುಂದುವರೆದು, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(4) ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಮೂರು ತಿಂಗಳೊಳಗೆ ಈ ಪ್ರಾಧಿಕಾರಕ್ಕೆ ತಿಳಿಸಲು ಹೇಳಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

K.N. Phanindra 21/4/22

(ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ)
ಉಪಲೋಕಾಯುಕ್ತರು-2
ಕರ್ನಾಟಕ ರಾಜ್ಯ, ಬೆಂಗಳೂರು